2. ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಕಾರ್ಯದರ್ಶಿ : ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2010ರ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ ಮತ್ತು 2010ರ ಕರ್ನಾಟಕ ಸಹಕಾರ ಸಂಘಗಳ (ಎರಡನೇ ತಿದ್ದುಪಡಿ) ವಿಧೇಯಕಗಳನ್ನು ಸಭೆಯ ಮುಂದಿಡುತ್ತಿದ್ದೇನೆ.

ಅಧ್ಯಕ್ಷರು : ಮಂಡಿಸಲಾಯಿತು.

ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಮುಖ್ಯಮಂತ್ರಿಗಳ ಪರವಾಗಿ): ಮಾನ್ಯ ಅಧ್ಯಕ್ಷರೆ, ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾ ಲೆಕ್ಕ ಪರಿಶೋಧಕರು 31ನೇ ಮಾರ್ಚ್, 2009ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಲೆಕ್ಕ ಪರಿಶೋಧನಾ (ರಾಜಸ್ವ ಸ್ವೀಕೃತಿಗಳು) ವರದಿಯನ್ನು ಸಭೆಯ ಮುಂದಿಡುತ್ತಿದ್ದೇನೆ.

ಅಧ್ಯಕ್ಷರು : ಮಂಡಿಸಲಾಯಿತು.

3. ಹಕ್ಕುಚ್ಯುತಿ ಮಂಡನೆಗೆ ಅನುಮತಿ ಕೋರಿಕೆ :

ನಾಗಮಂಗಲ ಶಾಸಕರ ಮೇಲೆ ನಾಗಮಂಗಲ ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ದಾಖಲಿಸಿರುವುದು.

. . . . .

ಶ್ರೀ ಕೆ.ಸುರೇಶ್‌ಗೌಡ (ನಾಗಮಂಗಲ) : ಮಾನ್ಯ ಸಭಾಧ್ಯಕ್ಷರೆ, ದಿನಾಂಕ: 26.1.2010ರ ಗಣರಾಜ್ಯೋತ್ಸವ ದಿನದಂದು ನಾಗಮಂಗಲ ಕ್ಷೇತ್ರದ ಶಾಸಕನಾದ ನನ್ನ ಮೇಲೆ ನಾಗಮಂಗಲ ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ಯೊಂದನ್ನು ದಾಖಲಿಸಿದ್ದಾರೆ. ದೂರು ಈ ರೀತಿ ಇದೆ:

"ಫಿರ್ಯಾದುದಾರರು:
ಸಾಕಪ್ಪ,
ವಲಯ ಅರಣ್ಯಾಧಿಕಾರಿ,
ನಾಗಮಂಗಲ ವಲಯ, ನಾಗಮಂಗಲ,